# ಪೊಲೀಸ್ ಇಲಾಖೆ

**(ISO: 9001-2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)**

**ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಆರ್‌ಪಿ & ಐಆರ್‌ಬಿ)–2420 ಮತ್ತು ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಬ್ಯಾಂಡ್ಸ್‌ಮೆನ್) (ಕೆಎಸ್‌ಆರ್‌ಪಿ & ಐಆರ್‌ಬಿ)–252 ಹುದ್ದೆಗಳ ನೇಮಕಾತಿ.**

**ಅಧಿಸೂಚನೆ ಸಂಖ್ಯೆ: 15/ನೇಮಕಾತಿ–4/2019–20**

**(ತಿದ್ದುಪಡಿ)**

ವಿಷಯ: ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಆರ್‌ಪಿ & ಐಆರ್‌ಬಿ)–2420 ಮತ್ತು ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಬ್ಯಾಂಡ್ಸ್‌ಮೆನ್) (ಕೆಎಸ್‌ಆರ್‌ಪಿ & ಐಆರ್‌ಬಿ)–252 ಖಾಲಿ ಹುದ್ದೆಗಳ ನೇರ ನೇಮಕಾತಿ ಕುರಿತು.

ಉಲ್ಲೇಖ: ಕರ್ನಾಟಕ ರಾಜ್ಯ ಪತ್ರ ದಿನಾಂಕ: 28.03.2020 ರಲ್ಲಿ ಪ್ರಕಟಿಸಲಾದ ಅಧಿಸೂಚನೆ ಸಂಖ್ಯೆ: 15/ನೇಮಕಾತಿ–4/2019–20

~*~*~*~

ಉಲ್ಲೇಖಿತ ಅಧಿಸೂಚನೆಯನ್ವಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಆರ್‌ಪಿ & ಐಆರ್‌ಬಿ)–2420 ಮತ್ತು ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಬ್ಯಾಂಡ್ಸ್‌ಮೆನ್) (ಕೆಎಸ್‌ಆರ್‌ಪಿ & ಐಆರ್‌ಬಿ)–252 ಖಾಲಿ ಹುದ್ದೆಗಳ ನೇರ ನೇಮಕಾತಿ ಸಲುವಾಗಿ ಅರ್ಹ ಅಭ್ಯರ್ಥಿಗಳಿಗೆ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ದಿನಾಂಕ:07.04.2020 ರಿಂದ 06.05.2020 ರವರೆಗೆ ಹಾಗೂ ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 08.05.2020 ರಂದು ನಿಗದಿಗೊಳಿಸಲಾಗಿರುತ್ತದೆ. ಆದರೆ ರಾಜ್ಯದಲ್ಲಿ ಉಂಟಾದ ವೈದ್ಯಕೀಯ ತುರ್ತು ಪರಿಸ್ಥಿತಿ ಹಿನ್ನೆಲೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲು ನಿಗದಿಪಡಿಸಲಾದ ದಿನಾಂಕಗಳನ್ನು ತಾತ್ಕಾಲಿಕವಾಗಿ ಮುಂದೂಡಲಾಗಿರುತ್ತದೆ.

ಮುಂದುವರೆದು ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಆರ್‌ಪಿ & ಐಆರ್‌ಬಿ)–2420 ಮತ್ತು ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಬ್ಯಾಂಡ್ಸ್‌ಮೆನ್) (ಕೆಎಸ್‌ಆರ್‌ಪಿ & ಐಆರ್‌ಬಿ)–252 ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ, ನಿಗದಿಪಡಿಸಲಾದ ದಿನಾಂಕಗಳ ಬದಲಿಗೆ ದಿನಾಂಕ: 18.05.2020 ರಿಂದ 15.06.2020 ರವರೆಗೆ ಮತ್ತು ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸುವ ದಿನಾಂಕವನ್ನು 18.06.2020ಕ್ಕೆ ಮರು ನಿಗದಿಪಡಿಸಲಾಗಿರುತ್ತದೆ. ವಿದ್ಯಾರ್ಹತೆಗೆ ಸಂಬಂಧಿಸಿದಂತೆ, ಕೊನೆಯ ದಿನಾಂಕ:15.06.2020ಕ್ಕೆ ಅನ್ವಯವಾಗುವಂತೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು ಹಾಗೂ ವಯೋಮಿತಿಗೆ ಸಂಬಂಧಿಸಿದಂತೆ, ದಿನಾಂಕ: 15.06.2020ಕ್ಕೆ ಅನ್ವಯವಾಗುವಂತೆ **ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಆರ್‌ಪಿ & ಐಆರ್‌ಬಿ) ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ 27 ವರ್ಷಗಳು, ಇತರೆ ಅಭ್ಯರ್ಥಿಗಳಿಗೆ 25 ವರ್ಷಗಳು ಹಾಗೂ ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಅಭ್ಯರ್ಥಿಗಳಿಗೆ 30 ವರ್ಷಗಳು ಮೀರಿರಬಾರದು.**

ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಬ್ಯಾಂಡ್ಸ್‌ಮೆನ್) (ಕೆಎಸ್‌ಆರ್‌ಪಿ & ಐಆರ್‌ಬಿ) ಹುದ್ದೆಗೆ ಅರ್ಜಿ ಸಲ್ಲಿಸುವ **ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ 30 ವರ್ಷಗಳು, ಇತರೆ ಅಭ್ಯರ್ಥಿಗಳಿಗೆ 25 ವರ್ಷಗಳು ಹಾಗೂ ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಅಭ್ಯರ್ಥಿಗಳಿಗೆ 33 ವರ್ಷಗಳು ಮೀರಿರಬಾರದು,** ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಉಳಿದಂತೆ ದಿನಾಂಕ: 28.03.2020 ರಂದು ಪ್ರಕಟಿಸಲಾದ ಅಧಿಸೂಚನೆಯಲ್ಲಿನ ಇತರೆ ಅರ್ಹತಾ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಮತ್ತು ಸಮನ್ವಯ ಅಧಿಕಾರಿ,
ಎಸ್‌ಆರ್‌ಪಿಸಿ ನೇಮಕಾತಿ ಸಮಿತಿ,
ಕಾರ್ಲ್‌ಟನ್ ಭವನ, ಅರಮನೆ ರಸ್ತೆ,
ಬೆಂಗಳೂರು–560 001.